## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ನಾಗಮಂಗಲ ತಾಲ್ಲೂಕು ಪಂಚಾಯಿತಿಯಲ್ಲಿ 2013-14ನೇ ಸಾಲಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಂಗನವಾಡಿ ಕಟ್ಟಡ ಯೋಜನೆಯ ಅನುದಾನದಲ್ಲಿ ನಡೆದಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿ/ನೌಕರರ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ಬದಲಿ ವಿಚಾರಣಾಧಿಕಾರಿಯನ್ನು ನೇಮಿಸುವ ಕುರಿತು ಆದೇಶ

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 139 ವಿಸೇಬಿ 2016 ದಿ: 14-07-2016-01-2015

-------

ಪ್ರಸ್ತಾವನೆ:

ಮೇಲೆ ಓದಲಾದ ಆದೇಶದಲ್ಲಿ ನಾಗಮಂಗಲ ತಾಲ್ಲೂಕು ಪಂಚಾಯಿತಿಯಲ್ಲಿ 2013-14ನೇ ಸಾಲಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಂಗನವಾಡಿ ಕಟ್ಟಡ ಯೋಜನೆಯ ಅನುದಾನದಲ್ಲಿ ನಡೆದಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವರೆನ್ನಲಾದ ಈ ಕೆಳಕಂಡ ಅಧಿಕಾರಿ/ನೌಕರರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 11ನ್ನು ಓದುವುದರೊಂದಿಗೆ ನಿಯಮ 13 ರಡಿ ಜಂಟಿ ಇಲಾಖಾ ವಿಚಾರಣೆ ನಡೆಸಲು ಶ್ರೀ ಶ್ರೀ.ರಾಧಾಕೃಷ್ಣ ಹೊಳ್ಳ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

1. ಶ್ರೀ. ಬೆಟ್ಟಸ್ವಾಮಿಗೌಡ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ನಾಗಮಂಗಲ.
2. ಶ್ರೀ. ಚಂದ್ರಹಾಸ, ಹಿಂದಿನ ಪ್ರಭಾರ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ನಾಗಮಂಗಲ.
3. ಶ್ರೀ. ಬಿ. ಕೆ. ವಿಶ್ವನಾಥ್, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ.
4. ಶ್ರೀ. ಜವರೇಗೌಡ, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ.
5. ಶ್ರೀ. ಜೆ. ರಘುನಾಥ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ.

ಆದರೆ, ವಿಚಾರಣಾಧಿಕಾರಿಯವರ ಮನೆ ವಿಳಾಸಕ್ಕೆ ಕಳುಹಿಸಲಾಗಿದ್ದ ಆದೇಶದ ಪ್ರತಿಯು ಸ್ವೀಕೃತವಾಗದೇ ವಾಪಸ್ಸು ಬಂದಿರುವುದರಿಂದ ಶ್ರೀ ಶ್ರೀ.ರಾಧಾಕೃಷ್ಣ ಹೊಳ್ಳ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರ ಬದಲಿಗೆ ಶ್ರೀ ಎಂ. ಎಸ್. ಹೆಗ್ಡೆ ನಾಗ್ರೆ, ನಿವೃತ್ತ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲು ಸರ್ಕಾರವು ನಿರ್ಧರಿಸಿ ಈ ಕೆಳಗಿನಂತೆ ಅದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 139 ವಿಸೇಬಿ 2015 ಬೆಂಗಳೂರು ದಿನಾಂಕ:23.11.2016

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡ ಅಧಿಕಾರಿ/ನೌಕರರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ

ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 13 ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆ ನಡೆಸಲು ಶ್ರೀ.ರಾಧಾಕೃಷ್ಣ ಹೊಳ್ಳ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರ ಬದಲಿಗೆ ಶ್ರೀ ಎಂ. ಎಸ್. ಹೆಗ್ಡೆ ನಾಗ್ರೆ (ನಿವೃತ್ತ) ಇವರನ್ನು ವಿಚಾರಣಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

1.ಶ್ರೀ. ಬೆಟ್ಟಸ್ವಾಮಿಗೌಡ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ನಾಗಮಂಗಲ.
2.ಶ್ರೀ. ಚಂದ್ರಹಾಸ, ಹಿಂದಿನ ಪ್ರಭಾರ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ನಾಗಮಂಗಲ.
3. ಶ್ರೀ. ಬಿ. ಕೆ. ವಿಶ್ವನಾಥ್, ಹಿಂದಿನ ಕಿರಿಯ ಇಂಜೀನಿಯರ್, ಪಂಚಾಯತ್ ರಾಜ್ ಇಂಜೀನಿಯರಿಂಗ್ ಉಪ ವಿಭಾಗ, ನಾಗಮಂಗಲ.
4. ಶ್ರೀ. ಜವರೇಗೌಡ, ಹಿಂದಿನ ಕಿರಿಯ ಇಂಜೀನಿಯರ್, ಪಂಚಾಯತ್ ರಾಜ್ ಇಂಜೀನಿಯರಿಂಗ್ ಉಪ ವಿಭಾಗ, ನಾಗಮಂಗಲ.
5. ಶ್ರೀ. ಜೆ. ರಘುನಾಥ್, ಸಹಾಯಕ ಕಾರ್ಯಪಾಲಕ ಇಂಜೀನಿಯರ್, ಪಂಚಾಯತ್ ರಾಜ್ ಇಂಜೀನಿಯರಿಂಗ್ ಉಪ ವಿಭಾಗ, ನಾಗಮಂಗಲ.

ಶಿಸ್ತು ಪ್ರಾಧಿಕಾರಿಯ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11(5)(ಸಿ) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಹಾಯಕ ಕಾರ್ಯದರ್ಶಿ ಜಿಲ್ಲಾ ಪಂಚಾಯತಿ, ಮಂಡ್ಯ ಇವರು ಮಂಡನಾಧಿಕಾರಿಯಾಗಿ ಮುಂದುವರೆದಿರುತ್ತಾರೆ.

ವಿಚಾರಣಾಧಿಕಾರಿಯವರು ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನ ಪ್ರಕಾರ ವಿಚಾರಣೆ ಜರುಗಿಸಿ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ) ಇವರು ಕ್ರಮ ಕೈಗೊಳ್ಳತಕ್ಕದ್ದು

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/45/ ಸೇಇವಿ/2014 ದಿನಾಂಕ: 08-01-2015 ರನ್ವಯ ವಾಹನ ಭತ್ಯೆಯೂ ಸೇರಿದಂತೆ ರೂ. 20,000/- ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ರಂಗನಗೌಡ.) 23/11/2016
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ.ಐ &ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಇಲಾಖೆ

GO

ಗೆ:

1. ಮಹಾಲೇಖಪಾಲರು,(ಎ & ಇ)) ಕರ್ನಾಟಕ, ಬೆಂಗಳೂರು.

2.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮಂಡ್ಯ/ಬೆಂಗಳೂರು(ಗ್ರಾ)

3.ಶ್ರೀ ಎಂ. ಎಸ್. ಹೆಗ್ಡೆ ನಾಗ್ರೆ, ನಿವೃತ್ತ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿಗಳು ನಂ.2/1, 18ನೇ ಮೇನ್,6ನೇ ಬ್ಲಾಕ್,ಕೋರಮಂಗಲ, ಬೆಂಗಳೂರು-560095. (ಮೊ.ನಂ. 9449747187)

4.ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಮಂಡ್ಯ ( ಮಂಡನಾಧಿಕಾರಿ). ಆಪಾದಿತ ಅಧಿಕಾರಿ/ನೌಕರರುಗಳಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮಂಡ್ಯ ಇವರ ಮುಖಾಂತರ)

5.ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.

6.ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.

7.ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.